ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಕೊಳವೆ ನೀರು ಸರಬರಾಜು ಯೋಜನೆ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

551 (499) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿವತಿಯಿಂದ ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ಕೈಗೊಂಡಿರುವ ಪಟ್ಟಣಕ್ಕೆ ಕೊಳವೆ ನೀರು ಸರಬರಾಜು ಯೋಜನೆ ಸದ್ಯ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆ ಶಂಕುಸ್ಥಾಪನೆಯಾಗಿದ್ದು ಯಾವಾಗ ;

(ಇ) ಈ ಯೋಜನೆಗಾಗಿ ಕಾಯ್ದಿರಿಸಲಾದ ಒಟ್ಟು ಅನುದಾನ ಎಷ್ಟು ;

(ಈ) ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು ಯಾವಾಗ ;

(ಉ) ಗುತ್ತಿಗೆಯನ್ನು ಯಾವ ಏಜೆನ್ಸಿಗೆ ನೀಡಲಾಗಿದೆ ; ಮತ್ತು ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಯಾವ ಅವಧಿಯೊಳಗೆ ಮುಕ್ತಾಯಗೊಳಿಸಲು ಸೂಚಿಸಲಾಗಿತ್ತು ?